2. ಗುತ್ತಿಗೆ ಆಧಾರದ ಮೇಲೆ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ 192 ಪಶುವೈದ್ಯಾಧಿಕಾರಿಗಳ ಸೇವೆಯನ್ನು ಸಕ್ರಮಗೊಳಿಸುವ ವಿಷಯ ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ.

489(912) : ಶ್ರೀ ಶ್ರೀರಾಮರಿಡ್ಡಿ .ಜಿ.ವಿ(ಬಾಗೆಪಲ್ಲಿ) ಮಾನ್ಯ ಸಕ್ಕರೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ನಷ್ಟದಲ್ಲಿರುವ ಸಕ್ಕರೆ ಕಾರ್ಖಾನೆಗಳನ್ನು ಪುನಶ್ಚೇತನಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ?

ಆ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಏನು ಕ್ರಮ ಕೈಗೊಂಡಿದೆ?

ಶ್ರೀ ಅಮರೇಗೌಡ.ಎಲ್.ಪಾಟೀಲ್ಬಯ್ಯಮರ(ಸಕ್ಕರೆ ಸಚಿವರು)

ಅ) ಹೌದು

ಆ) ರಾಜ್ಯದಲ್ಲಿ ಅವನತಿಯಲ್ಲಿರುವ ಸಹಕಾರ ಸಕ್ಕರೆ ಕಾರ್ಖಾನೆಗಳ ಪುನಃಶ್ಚೇತನದ ಬಗ್ಗೆ ಪರಿಶೀಲಿಸಲು ಸರ್ಕಾರವು ರಚಿಸಿರುವ ಸಚಿವ ಸಂಪುಟದ ಉಪ ಸಮಿತಿಯು ಸರ್ಕಾರಕ್ಕೆ ತನ್ನ ವರದಿಯನ್ನು ಈಗಾಗಲೇ ಸಲ್ಲಿಸಿದ್ದು, ಸದರಿ ವರದಿಯು ಸಹಕಾರ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.

490(913) : ಶ್ರೀರಾಮರೆಡ್ಡಿ ಜಿ.ವಿ (ಭಾಗೇಪಲ್ಲಿ) ಮಾನ್ಯ ರೇಷ್ಮೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ರಾಜ್ಯದಲ್ಲಿ ರೇಷ್ಮೆ ಉದ್ಯಮವು ತೀವ್ರ ಸಂಕಷ್ಟ ಪರಿಸ್ಥಿತಿಯಲ್ಲಿದ್ದು ಇಡಿ ಉದ್ಯಮವೇ ಅಧಃಪತನದ ಹಾದಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಲಕ್ಷಾಂತರ ಜನ ಪುರುಷ ಮಹಿಳೆಯರು ಉದ್ಯೋಗಾವಕಾಶ ಕಲ್ಪಿಸುವ ಈ ಉದ್ಯಮವನ್ನು ಪುನಃಶ್ಚೇತನಗೊಳಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ಜನ್ನಿಗಪ್ಪ (ರೇಷ್ಮೆ ಸಚಿವರು) :

ಅ) ಇಲ್ಲ

ಆ) ರಾಜ್ಯದಲ್ಲಿ ರೇಷ್ಮೆ ಉತ್ಪಾದನೆಯನ್ನು ಹೆಚ್ಚಿಸಿ ಎಲ್ಲಾ ವರ್ಗಗಳಿಗೂ ಉದ್ಯೋಗಾವಕಾಶ ಮತ್ತು ಆದಾಯಗಳನ್ನು ಹೆಚ್ಚಿಸುವ ಸಲುವಾಗಿ ಕೇಂದ್ರ ರೇಷ್ಮೆ ಮಂಡಳಿಯ ಸಹಕಾರದೊಂದಿಗೆ ಇಲಾಖೆಯು ಕೆಟಲಿಟಿಕ್ ಅಭಿವೃದ್ಧಿ ಯೋಜನೆಯಡಿ ಹಾಗೂ ಇನ್ನಿತರ ಯೋಜನೆಗಳಲ್ಲಿ ರೇಷ್ಮೆ ಉದ್ಯಮದಲ್ಲಿ ತೊಡಗಿರುವವರಿಗೆ ಕೆಳಕಂಡ ಸೌಲಭ್ಯ ಕಲ್ಪಿಸಲಾಗುತ್ತದೆ.

1. ರೇಷ್ಮೆ ಹುಳು ಸಾಕಾಣಿಕೆ ಮನೆ ನಿರ್ಮಾಣಕ್ಕೆ ಸಹಾಯಧನ.
2. ರೇಷ್ಮೆ ಹುಳು ಸಾಕಾಣಿಕೆ ಸಲಕರಣೆಗಳಿಗೆ ಸಹಾಯಧನ.
3. ಹಿಪ್ಪುನೇರಳೆ ತೋಟಕ್ಕೆ ಹನಿ ನೀರಾವರಿ ಅಳವಡಿಕೆಗೆ ಸಹಾಯಧನ.
4. ರೋಗ ನಿಯಂತ್ರಣಕ್ಕಾಗಿ ಸೋಂಕು ನಿವಾರಕಗಳ ಸರಬರಾಜು.
5. ಚಾಕಿ ಸಾಗಾಣಿಕೆ ಕೇಂದ್ರಗಳ ನಿರ್ಮಾಣ ಮತ್ತು ಸಲಕರಣೆಗಳಿಗೆ ಸಹಾಯಧನ.
6. ಹೊಸದಾಗಿ ರೇಷ್ಮೆ ಕೃಷಿ ಕೈಗೊಳ್ಳುವ ರೈತರಿಗೆ ತರಬೇತಿ ಮತ್ತು ಟೂಲ್‌ಕಿಟ್ ನೀಡುವುದು.